ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 528
ಮಾನ್ಯ ಸದಸ್ಯರ ಹೆಸರು	: ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	: 09-03-2020
ಉತ್ತರಿಸುವ ಸಚಿವರು	: ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)

	ಪ್ರಶ್ನೆ	ಉತ್ತರ
ಅ	ಸರ್ಕಾರಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಮಂದಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗಿದೆ.	ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 288, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 990 ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ 42 ಒಟ್ಟಾರೆ 1320 ಅರೆಕಾಲಿಕ ಅತಿಥಿ ಉಪನ್ಯಾಸಕರುಗಳನ್ನು ಪ್ರಸಕ್ತ ಸಾಲಿನಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಎದುರಾಗಿ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ.
ಆ	ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವಲ್ಲಿನ ಮಾನದಂಡಗಳೇನು; (ವಿವರ ನೀಡುವುದು)	ಪ್ರಸ್ತುತ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ ಪೂರ್ಣಕಾಲಿಕ ಉಪನ್ಯಾಸಕ/ ಸಹಾಯಕ ಪ್ರಾಧ್ಯಾಪಕ ಹುದ್ದೆಗೆದುರಾಗಿ ಅರೆಕಾಲಿಕ ಉಪನ್ಯಾಸಕರ ನೇಮಕಾತಿಯನ್ನು ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಉಪನ್ಯಾಸಕರು/ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಗನುಗುಣವಾಗಿ ಪ್ರಾಂಶುಪಾಲರ ಹಂತದಲ್ಲಿ ನೇಮಕಾತಿ ಮಾಡಿಕೊಂಡು, ನಂತರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಪರಿಶೀಲಿಸಿ ಅನುಮೋದನೆ ನೀಡಲಾಗುತ್ತಿದೆ.
ಇ	ಸದರಿಯವರಿಗೆ ತಲಾ ನೀಡಲಾಗುತ್ತಿರುವ ಗೌರವಧನದ ಮೊತ್ತವೆಷ್ಟು; ಯಾವ ಸಾಲಿನಿಂದ ನೀಡಲಾಗುತ್ತಿದೆ;	ಸರ್ಕಾರದ ಆದೇಶ ಸಂಖ್ಯೆ: ಇಡಿ 16 ಟಿಪಿಇ 2017, ದಿನಾಂಕ: 11.12.2019 ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರ ಮಾಸಿಕ ವೇತನವನ್ನು ರೂ. 12,500/- ಗಳಿಗೆ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರತಿ ಅರೆಕಾಲಿಕ ಉಪನ್ಯಾಸಕರ ಪ್ರತಿ ತಿಂಗಳ ಮಾಸಿಕ ವೇತನವನ್ನು 15,000/- ರೂ ಗಳಿಗೆ ಹೆಚ್ಚಿಸಲಾಗಿರುತ್ತದೆ.
ಈ	ಸದರಿಯವರಿಗೆ ಕಳೆದ 18 ತಿಂಗಳಿನಿಂದ ಗೌರವಧನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.

...2

ಉ	ಸದರಿ ಗೌರವಧನ ಪಾವತಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು;	2019-20 ನೇ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ನಿರ್ವಹಣೆಗಾಗಿ ಲೆಕ್ಕ ಶೀರ್ಷಿಕೆ 2203-00-112-0-02-051 ರಡಿ ಅರೆಕಾಲಿಕ ಉಪನ್ಯಾಸಕರ ಭತ್ಯೆ ಪಾವತಿಸಲು ಒಟ್ಟು ಅಗತ್ಯವಿದ್ದ ರೂ 544.00 ಲಕ್ಷಗಳ ಎದುರಾಗಿ ಕೇವಲ ರೂ 9.00 ಲಕ್ಷಗಳನ್ನು ಮಾತ್ರ ಒದಗಿಸಲಾಗಿದೆ. ಇದೇ ರೀತಿ ಸರ್ಕಾರಿ ಪಾಲಿಟೆಕ್ನಿಕ್ ಲೆಕ್ಕ ಶೀರ್ಷಿಕೆ 2203-00-105-0-01-051 ರಡಿ ಅರೆಕಾಲಿಕ ಉಪನ್ಯಾಕರಿಗೆ ಒಟ್ಟು 977.92 ಲಕ್ಷಗಳ ಎದುರಾಗಿ ಕೇವಲ ರೂ 359.00 ಲಕ್ಷಗಳನ್ನು ಮಾತ್ರ ಒದಗಿಸಲಾಗಿದೆ. ಅನುದಾನದ ಕೊರತೆಯಿಂದಾಗಿ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ಬಾಕಿಯಿರುವ ಭತ್ಯೆ ಪಾವತಿಸುವುದು ಸಾಧ್ಯವಾಗಿರುವುದಿಲ್ಲ,
ಊ	ಯಾವ ಕಾಲಮಿತಿಯಲ್ಲಿ ಬಾಕಿ ಇರುವ ಗೌರವಧನವನ್ನು ಪಾವತಿಸಲಾಗುವುದು?	ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಅರೆಕಾಲಿಕ ಉಪನ್ಯಾಸಕರ ವೇತನ ಭತ್ಯೆಯನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಒದಗಿಸಲು ಆರ್ಥಿಕ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದೆ.

ಇಡಿ 31 ಟಿಪಿಇ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಇಲಾಖೆ)